ಕರ್ನಾಟಕ ಸರ್ಕಾರ

ಸಂಖ್ಯೆ: ಪಪೂಶಿಇ/ಆವಿಎ/ವಿನಿ3/ಪ್ರಾ.ವರ್ಗ/03/2020-21

ನಿರ್ದೇಶಕರ ಕಚೇರಿ
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560 012
ದಿನಾಂಕ: 08/11/2020.

## ಜ್ಞಾಪನ

ವಿಷಯ : 2019-20ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ವೃಂದದ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸೆಲಿಂಗ್ ಮೂಲಕ ನಿರ್ವಹಿಸಲು ತಾತ್ಕಾಲಿಕ ಆದ್ಯತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ: ಈ ಕಚೇರಿಯ ಇದೇ ಸಮ ಸಂಖ್ಯೆಯ ಜ್ಞಾಪನ ದಿನಾಂಕ: 04.11.2020.

****

2019-20ನೇ ಸಾಲಿಗೆ ಪ್ರಾಂಶುಪಾಲರ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸೆಲಿಂಗ್ ನಡೆಸಲು ವರ್ಗಾವಣೆಗೆ ಅರ್ಜಿಗಳನ್ನು ಆನ್‌ಲೈನ್ ಮೂಲಕ ಮಾತ್ರ ಸಲ್ಲಿಸಲು ಉಲ್ಲೇಖಿತ ಜ್ಞಾಪನದಲ್ಲಿ ತಿಳಿಸಲಾಗಿತ್ತು.

ಆನ್‌ಲೈನ್ ಮುಖಾಂತರ ಸಲ್ಲಿಕೆಯಾಗಿರುವ ಪ್ರಾಂಶುಪಾಲರ ವರ್ಗಾವಣಾ ಅರ್ಜಿಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲಾಗಿದ್ದು, ಡೌನ್‌ಲೋಡ್ ಮಾಡಿಕೊಂಡ ಅರ್ಜಿಗಳನ್ನು ಪರಿಶೀಲಿಸಿ ವರ್ಗಾವಣೆಗೆ ಅರ್ಹರಿರುವ ಮತ್ತು ಅನರ್ಹರಿರುವ ಪ್ರಾಂಶುಪಾಲರ ತಾತ್ಕಾಲಿಕ ಪಟ್ಟಿಯನ್ನು ಸಿದ್ಧಪಡಿಸಿ ಪ್ರಕಟಿಸಲಾಗಿದೆ.

ಪ್ರಕಟಿಸಲಾಗಿರುವ ತಾತ್ಕಾಲಿಕ ಪಟ್ಟಿಗೆ ಏನೇ ಆಕ್ಷೇಪಣೆಗಳು ಇದ್ದಲ್ಲಿ, ಪೂರಕ ದಾಖಲೆಗಳೊಂದಿಗೆ ದಿನಾಂಕ: 09.11.2020ರ ಒಳಗಾಗಿ ಇ-ಮೇಲ್ ಮೂಲಕ pue.transfer@gmail.com ಈ ವಿಳಾಸಕ್ಕೆ ಸಲ್ಲಿಸುವುದು.

ನಿಗದಿತ ದಿನಾಂಕದ ನಂತರ ಸಲ್ಲಿಸಲ್ಪಡುವ ಯಾವುದೇ ಆಕ್ಷೇಪಣೆಗಳನ್ನು ಪುರಸ್ಕರಿಸಲಾಗುವುದಿಲ್ಲ. ಅಂತಿಮ ಆದ್ಯತಾ ಪಟ್ಟಿಯನ್ನು ಪ್ರಕಟಿಸಿದ ನಂತರ ಕೌನ್ಸೆಲಿಂಗ್ ದಿನಾಂಕವನ್ನು ಪ್ರಕಟಿಸಲಾಗುವುದು.

*"ಮಾನ್ಯ ನಿರ್ದೇಶಕರ ಆದೇಶದ ಮೇರೆಗೆ"*

ಜಂಟಿ ನಿರ್ದೇಶಕರು(ಆಡಳಿತ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ – ಇವರಿಗೆ ಸೂಕ್ತ ಕ್ರಮಕ್ಕಾಗಿ (ಪ್ರಾಂಶುಪಾಲರ ಗಮನಕ್ಕೆ ತರಲು ತಾತ್ಕಾಲಿಕ ಪಟ್ಟಿಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಲು).
2. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ – ಅಂತರ್ಜಾಲದಲ್ಲಿ ಅಳವಡಿಸಲು.
3. ಕಚೇರಿ / ಹೆಚ್ಚುವರಿ ಪ್ರತಿ.